# ಕರ್ನಾಟಕ ವಿಧಾನ ಪರಿಷತ್ತು

| | | |
|---|---|---|
| ಚುಕ್ಕೆಗುರುತಿಲ್ಲದ ಪ್ರಶ್ನೆ ಸಂಖ್ಯೆ | : | 760 |
| ಸದಸ್ಯರ ಹೆಸರು | : | ಶ್ರೀ ಸಿ.ಎನ್. ಮಂಜೇಗೌಡ<br>(ಸ್ಥಳೀಯ ಸಂಸ್ಥೆಗಳ ಕ್ಷೇತ್ರ) |
| ಉತ್ತರಿಸಬೇಕಾದ ದಿನಾಂಕ | : | 16.12.2024 |
| ಉತ್ತರಿಸುವ ಸಚಿವರು | : | ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು |

| ಕ್ರ.ಸಂ | ಪ್ರಶ್ನೆ | ಉತ್ತರ |
|---|---|---|
| ಅ) | ಉದ್ಯಮಿ ಅಜೀಂ ಪ್ರೇಮ್‌ಜಿ ಫೌಂಡೇಷನ್ ರಾಜ್ಯದ ಸರ್ಕಾರಿ ಮತ್ತು ಅನುದಾನಿತ ಶಾಲಾ ವಿದ್ಯಾರ್ಥಿಗಳಿಗೆ ವಾರದಲ್ಲಿ 6 ದಿನ ಮೊಟ್ಟೆ ಯೋಜನೆಗೆ ವಿಶೇಷ ಆರ್ಥಿಕ ನೆರವು ನೀಡಿರುವುದು ನಿಜವೇ; | ಅಜೀಂ ಪ್ರೇಮ್‌ಜಿ ಫೌಂಡೇಷನ್, ಬೆಂಗಳೂರು ಈ ಸಂಸ್ಥೆಯ ವತಿಯಿಂದ ರಾಜ್ಯದಲ್ಲಿ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಾರದಲ್ಲಿ 04 ದಿನಗಳ ಅವಧಿಗೆ ಪೂರಕ ಪೌಷ್ಠಿಕ ಆಹಾರಗಳಾದ ಮೊಟ್ಟೆ/ಬಾಳೆಹಣ್ಣು/ ಶೇಂಗಾ ಚಿಕ್ಕಿಯನ್ನು ವಿತರಿಸಲು ಆರ್ಥಿಕ ನೆರವು ನೀಡಲಾಗಿದೆ. |
| ಆ) | ಹಾಗಿದ್ದಲ್ಲಿ ಈ ಯೋಜನೆಗಾಗಿ ರಾಜ್ಯ ಸರ್ಕಾರಕ್ಕೆ ನೀಡುವ ಆರ್ಥಿಕ ನೆರವೇಷ್ಟು; ಎಷ್ಟು ಜನ ಮಕ್ಕಳು ಈ ಯೋಜನೆಯ ಲಾಭ ಪಡೆಯುತ್ತಿದ್ದಾರೆ. | ಇದುವರೆವಿಗೂ ಅಜೀಂ ಪ್ರೇಮ್‌ಜಿ ಫೌಂಡೇಷನ್, ಬೆಂಗಳೂರು ಈ ಸಂಸ್ಥೆಯಿಂದ ಮೊದಲನೇ ಕಂತಿನಲ್ಲಿ ರೂ 26.52 ಕೋಟಿ ಅನುದಾನ, ಎರಡನೇ ಕಂತಿನಲ್ಲಿ ರೂ 132.63 ಕೋಟಿಗಳ ಅನುದಾನ ಒಳಗೊಂಡಂತೆ ಒಟ್ಟಾರೆಯಾಗಿ ರೂ 159.15 ಕೋಟಿಗಳ ಅನುದಾನವನ್ನು ಬಿಡುಗಡೆ ಮಾಡಲಾಗಿದ್ದು, 53.00 ಲಕ್ಷ ವಿದ್ಯಾರ್ಥಿಗಳು ಈ ಯೋಜನೆಯ ಲಾಭ ಪಡೆಯುತ್ತಿದ್ದಾರೆ. |
| ಇ) | ಈ ನೆರವಿನ ಸಹಾಯದಿಂದ ಯಾವ ಯಾವ ಕಾರ್ಯಕ್ರಮಗಳನ್ನು ರೂಪಿಸಲಾಗಿದೆ. | ಈ ಹಿಂದೆ ರಾಜ್ಯ ಸರ್ಕಾರದಿಂದ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ವಾರದಲ್ಲಿ 02 ದಿನ ಪೂರಕ ಪೌಷ್ಠಿಕ ಆಹಾರಗಳಾದ ಮೊಟ್ಟೆ/ಬಾಳೆಹಣ್ಣು/ ಶೇಂಗಾ ಚಿಕ್ಕಿಯನ್ನು ವಿತರಿಸಲಾಗುತಿತ್ತು.<br><br>ಆದರೆ ಪ್ರಸ್ತುತ ಅಜೀಂ ಪ್ರೇಮ್‌ಜಿ ಫೌಂಡೇಷನ್, ಬೆಂಗಳೂರು ಈ ಸಂಸ್ಥೆಯ ನೆರವಿನಿಂದ ವಾರದ ಉಳಿದ 04 ದಿನಗಳ ಅವಧಿಗೆ ಸರ್ಕಾರಿ ಮತ್ತು ಅನುದಾನಿತ ಶಾಲೆಗಳಲ್ಲಿ ವ್ಯಾಸಂಗ ಮಾಡುತ್ತಿರುವ ವಿದ್ಯಾರ್ಥಿಗಳಿಗೆ ಪೂರಕ ಪೌಷ್ಠಿಕ ಆಹಾರಗಳಾದ ಮೊಟ್ಟೆ/ಬಾಳೆಹಣ್ಣು/ ಶೇಂಗಾ ಚಿಕ್ಕಿಯನ್ನು ವಿತರಿಸಲಾಗುತ್ತಿದೆ. |
| ಈ) | ಇತ್ತೀಚಿಗೆ 6 ದಿನ ಕಾಲ ಮೊಟ್ಟೆ ವಿತರಿಸಲು ಸಾಧ್ಯವಾಗದಿರುವುದು ಸರ್ಕಾರದ ಗಮನಕ್ಕೆ ಬಂದಿದೆಯೇ; ಇದಕ್ಕೆ ಕಾರಣಗಳೇನು? | ಕೆಲವು ಶಾಲೆಗಳಲ್ಲಿ ಮೊಟ್ಟೆ ವಿತರಣಾ ಕಾರ್ಯವು ಸಮರ್ಪಕವಾಗಿ ಅನುಷ್ಠಾನಗೊಳ್ಳದೇ ಇರುವುದು ಇಲಾಖೆಯ ಗಮನಕ್ಕೆ ಬಂದಿರುತ್ತದೆ. ಈ ಬಗ್ಗೆ ತಾಲ್ಲೂಕು ಹಾಗೂ ಜಿಲ್ಲಾ ಹಂತದ ಮೇಲ್ವಿಚಾರಣಾಧಿಕಾರಿಗಳಿಗೆ ಕಾರಣ ಕೇಳಿ ನೋಟಿಸ್ ನೀಡಲಾಗಿದೆ. ಆ ಮೂಲಕ ಸಮರ್ಪಕವಾಗಿ ಅನುಷ್ಠಾನಗೊಳ್ಳುವಂತೆ ಕ್ರಮವಹಿಸಲಾಗಿದೆ. |

ಇಪಿ 110 ಎಂಎಂಎಸ್ 2024

**(ಎಸ್.ಮಧು ಬಂಗಾರಪ್ಪ)**
**ಶಾಲಾ ಶಿಕ್ಷಣ ಮತ್ತು ಸಾಕ್ಷರತಾ ಸಚಿವರು.**